ಕರ್ನಾಟಕ ವಿಧಾನ ಸಭೆ, ಸಂಶೋಧನಾ ಹಾಗೂ ಉಲ್ಲೇಖನಾ ಶಾಖೆ
KARNATAKA LEGISLATIVE ASSEMBLY RESEARCH AND REFERENCE BRANCH

ಪತ್ರಿಕಾ ತುಣುಕುಗಳು
PAPER CLIPPINGS

ಇಲಾಖೆ / ವಿಷಯ : DEPARTMENT / SUBJECT: ಪ್ರವಾಸೋದ್ಯಮ

ಪತ್ರಿಕೆಯ ಹೆಸರು : NAME OF THE NEWS PAPER: ವಿಶ್ವವಾಣಿ    ದಿನಾಂಕ : DATE 03/10/2019

# ಸ್ಮಾರಕಗಳ ಬಳಿ ಏಕಬಳಕೆ ಪ್ಲಾಸ್ಟಿಕ್‌ಗೆ ಅನುಮತಿ ಇಲ್ಲ



ರಾಷ್ಟ್ರಪಿತ ಮಹಾತ್ಮ ಗಾಂಧೀಜಿ ಅವರ 150ನೇ ಜಯಂತಿ ಅಂಗವಾಗಿ ರಾಜ್‌ಘಾಟ್‌ನಲ್ಲಿರುವ ಅವರ ಸಮಾಧಿಗೆ ಪ್ರಧಾನಿ ನರೇಂದ್ರ ಮೋದಿ ಅವರು ಭೇಟಿ ನೀಡಿ ನಮನ ಸಲ್ಲಿಸಿದರು.

- **ಬಿಜೆಪಿ ಸಂಕಲ್ಪ ಯಾತ್ರೆಗೆ ಚಾಲನೆ**
- **ಪಕ್ಷದ ಎಲ್ಲ ಜನಪ್ರತಿನಿಧಿಗಳು 15 ದಿನಗಳ ಪಾದಯಾತ್ರೆ ಕೈಗೊಳ್ಳಲು ಸೂಚನೆ**
- **ಕಾಂಗ್ರೆಸ್‌ನಿಂದಲೂ ಪಾದಯಾತ್ರೆ ಮತ್ತಿತರ ಕಾರ್ಯಕ್ರಮಗಳು**

**ನವದೆಹಲಿ:** ದೇಶದ ಐತಿಹಾಸಿಕ ಸ್ಮಾರಕಗಳ ಆವರಣದಲ್ಲಿ ಇನ್ನು ಮುಂದೆ ಒಂದುಬಾರಿ ಮಾತ್ರ ಬಳಸುವಂಥ ಪ್ಲಾಸ್ಟಿಕ್ ವಸ್ತುಗಳ ಉಪಯೋಗಕ್ಕೆ ಅವಕಾಶವಿಲ್ಲ ಎಂದು ಕೇಂದ್ರ ಪ್ರವಾಸೋದ್ಯಮ ಖಾತೆ ಸಚಿವ ಪ್ರಹ್ಲಾದ್ ಪಟೇಲ್ ಪ್ರಕಟಿಸಿದ್ದಾರೆ.

ಅಲ್ಲದೆ ಇಂಥ ಸ್ಮಾರಕಗಳಿರುವ ಸ್ಥಳಗಳ 100 ಮೀಟರ್ ಫಾಸಲೆಯಲ್ಲೂ ಇವುಗಳನ್ನು ಬಳಸುವಂತಿಲ್ಲ ಎಂದು ಅವರು ಹೇಳಿದ್ದಾರೆ

ಏಕಬಳಕೆಯ ಪ್ಲಾಸ್ಟಿಕ್ ಉಪಯೋಗವನ್ನು ಕೈಬಿಡಬೇಕು ಎಂದು ಪ್ರಧಾನಮಂತ್ರಿ ನರೇಂದ್ರ ಮೋದಿ ಅವರು ಮನವಿ ಮಾಡಿ ಅದಕ್ಕೆ ಒತ್ತು ನೀಡುತ್ತಿರುವ ಹಿನ್ನೆಲೆಯಲ್ಲಿ ಸಚಿವರ ಈ ಪ್ರಕಟಣೆ ಹೊರಬಿದ್ದಿದೆ.

'ಪರ್ಯಟನ್ ಪರ್ವ' ಎಂಬ ಪ್ರವಾಸಿ ಮೇಳವನ್ನು ಬುಧವಾರ ಇಲ್ಲಿ ಉದ್ಘಾಟಿಸಿ ಮಾತನಾಡುತ್ತ ಸಚಿವ ಪಟೇಲ್ ಅವರು ಈ ಘೋಷಣೆ ಮಾಡಿದರು

**ಪ್ಲಾಸ್ಟಿಕ್ ನಿಷೇಧ ಇಲ್ಲ:** ಆದರೆ ಏಕಬಳಕೆಯ ಪ್ಲಾಸ್ಟಿಕ್ ಬಳಕೆಯ ಮೇಲೆ ನಿಷೇಧ ವಿಧಿಸಿಲ್ಲ ಎಂದು ಕೇಂದ್ರ ಸರಕಾರ ತಿಳಿಸಿದೆ. ಏಕಬಳಕೆಯ ಪ್ಲಾಸ್ಟಿಕ್ ಉಪಯೋಗ ನಿಲ್ಲಿಸಬೇಕು ಎಂದು ಪ್ರಧಾನಿ ಕರೆ ನೀಡಿರುವ ಹಿನ್ನೆಲೆಯಲ್ಲಿ ಸರಕಾರ ಇದನ್ನು ನಿಷೇಧಿಸಿದೆ ಎಂಬ ಮಾತುಗಳು ಕೇಳಿಬಂದಿದ್ದವು.

ಈ ಹಿನ್ನೆಲೆಯಲ್ಲಿ ಸರಕಾರ ಸ್ಪಷ್ಟೀಕರಣ ನೀಡಿದೆ.ಒಂದೇ ಬಾರಿ ಬಳಸಿ ಬಿಸಾಡುವಂಥ ಪ್ಲಾಸ್ಟಿಕ್ ವಸ್ತುಗಳನ್ನು ನಿಷೇಧಿಸಿಲ್ಲ, ಆದರೆ ಅದರ ಬಳಕೆಯನ್ನು ನಿಲ್ಲಿಸುವುದು ಒಳಿತು. ಹಾಗೆಂದು ಇದು ಕಡ್ಡಾಯವಲ್ಲ.ಅವರ ವಿವೇಚನೆಗೆ ಬಿಟ್ಟಿದ್ದು ಎಂದು ಅದು ವಿವರಿಸಿದೆ.

ಆದರೂ ಇದರ ಮೇಲೆ ನಿಷೇಧ ಹೇರಲು ಸರಕಾರ ಚಿಂತನೆ ನಡೆಸಿತ್ತು.ಆದರೆ ದೇಶದಲ್ಲಿ ಆರ್ಥಿಕ ಹಿಂಜರಿತದಿಂದ ಉದ್ಯಮವಲಯ ಈಗಾಗಲೇ ಜರ್ಜರಿತವಾಗಿದ್ದು, ಪ್ಲಾಸ್ಟಿಕ್ ನಿಷೇಧವು ಆ ಉದ್ಯಮಕ್ಕೆ ಮರ್ಮಾಘಾತ ನೀಡಬಹುದು ಎಂಬ ಹಿಂಜರಿಕೆಯಿಂದ ನಿಷೇಧ ವಿಧಿಸಿಲ್ಲ ಎಂಬ ಮಾತುಗಳು ಕೇಳಿಬರುತ್ತಿವೆ.

**ರಾಷ್ಟ್ರಪಿತನಿಗೆ ನಮನ:** ಮಹಾತ್ಮ ಗಾಂಧಿ ಅವರ 150 ನೇ ಜನ್ಮದಿನದ ಸಂದರ್ಭದಲ್ಲಿ ದೇಶ ವಿದೇಶಗಳಲ್ಲಿ ರಾಷ್ಟ್ರಪಿತನಿಗೆ ಬುಧವಾರ ಗೌರವ ಸಲ್ಲಿಸಲಾಯಿತು.

ಪ್ರಧಾನಿ ನರೇಂದ್ರ ಮೋದಿ ಅವರು ರಾಜ್‌ಘಾಟ್ ನಲ್ಲಿರುವ ಮಹಾತ್ಮ ಸಮಾಧಿಗೆ ತೆರಳಿ ಅವರಿಗೆ ಪುಷ್ಪನಮನ ಸಲ್ಲಿಸಿದರು.ಬಳಿಕ ಸಂಜೆ ಸಾಬರಮತಿ ಆಶ್ರಮಕ್ಕೆ ತೆರಳಿ ಗಾಂಧೀಜಿ ಆಶ್ರಮಕ್ಕೆ ಭೇಟಿ ನೀಡಿದರು.

ಬಿಜೆಪಿ ಅಧ್ಯಕ್ಷ ಅಮಿತ್ ಶಾ ಅವರು ಗಾಂಧಿ ತತ್ತ್ವಗಳನ್ನು ಸಾರುವ ಗಾಂಧಿ ಸಂಕಲ್ಪ ಯಾತ್ರೆಗೆ ಆಂದೋಲನಕ್ಕೆ ಚಾಲನೆ ನೀಡಿದರು.

ಕಾಂಗ್ರೆಸ್ ಹಂಗಾಮಿ ಅಧ್ಯಕ್ಷೆ ಸೋನಿಯಾ ಗಾಂಧಿ, ರಾಹುಲ್ ಗಾಂಧಿ ಮತ್ತಿತರ ಕಾಂಗ್ರೆಸ್ ನಾಯಕರೂ ಮಹಾತ್ಮ ಗಾಂಧಿ ಸಮಾಧಿಗೆ ತೆರಳಿ ಗೌರವ ಸಲ್ಲಿಸಿದರು.

2